ಕರ್ನಾಟಕ ಸರ್ಕಾರ
Government Of Karnataka
# ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ
# Karnataka State Rural Development and Panchayat Raj University, Gadag
ರೈತ ಭವನ, ಜನರಲ್ ಕಾರ್ಯಪ್ಪ ವೃತ್ತ, ಗದಗ– 582 101
Raith Bhavan Building, General Carippa Circle, Gadag – 582 101
email: registrarksrdpru@gmail.com Office Phone: 08372-230338, Fax:08372-297343

ಕ್ರಮ ಸಂಖ್ಯೆ : ಕರಾಗ್ರಾಅಪಂರಾವಿವಿ/ಲಾ.ಘೋ/2017-18 ದಿನಾಂಕ: 26-08-2017

## ಪತ್ರಿಕಾ ಪ್ರಕಟಣೆ

**ವಿಷಯ:** ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯಕ್ಕೆ ಸೂಕ್ತವಾದ 'ಲಾಂಛನ' ಮತ್ತು 'ಘೋಷವಾಕ್ಯ'ಗಳನ್ನು ತಯಾರಿಸುವ ಬಗ್ಗೆ.

ಕರ್ನಾಟಕ ರಾಜ್ಯ ಸರ್ಕಾರ ವಿಶೇಷ ರಾಜ್ಯ ಪತ್ರಿಕೆ ದಿನಾಂಕ: 26-07-2017 ರಂದು ಅಧಿಸೂಚಿಸಿರುವಂತೆ ಸುಸ್ಥಿರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ವಿಷಯದಲ್ಲಿ ಬೋಧನೆ, ತರಬೇತಿ, ಸಂಶೋಧನೆಗಾಗಿ ಕರ್ನಾಟಕ ರಾಜ್ಯದಲ್ಲಿ ಏಕಾತ್ಮಕ ಸ್ವರೂಪದ "ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ"ವನ್ನು ಗದಗದಲ್ಲಿ ಸ್ಥಾಪಿಸಿದೆ. ವಿಶ್ವವಿದ್ಯಾಲಯವು 2017-18ನೇ ಸಾಲಿನಿಂದ ಕಾರ್ಯ ಚಟುವಟಿಕೆಗಳನ್ನು ಪ್ರಾರಂಭಿಸಿದೆ. ವಿಶ್ವವಿದ್ಯಾಲಯದ ದೃಷ್ಟಿ ಮತ್ತು ಗುರಿಗಳು ಈ ಕೆಳಕಂಡಂತಿವೆ.

ವಿಶ್ವವಿದ್ಯಾಲಯದ **ದೃಷ್ಟಿಯು** ಸುಸ್ಥಿರ ಗ್ರಾಮೀಣಾಭಿವೃದ್ಧಿ ಹಾಗೂ ಗ್ರಾಮೀಣ ಜನತೆಯ ಜೀವನ ಗುಣಮಟ್ಟವನ್ನು ವಿಶಾಲ ಹರವಿನ ಸುಧಾರಣೆಯನ್ನು ಖಚಿತಪಡಿಸುವ ಗ್ರಾಮೀಣಾಭಿವೃದ್ಧಿ ಪ್ರಕ್ರಿಯೆಯಲ್ಲಿ ಭಾಗಿಯಾಗುವಂತಹ ಸಮರ್ಪಣಾ ಮನೋಭಾವದ, ಬದ್ಧತೆಯುಳ್ಳ, ಮಾನವ ಸಂಪನ್ಮೂಲವನ್ನು ಸೃಜಿಸುವ ಮೂಲಕ ಗ್ರಾಮೀಣ ಸಮಾಜದ ಉತ್ಕೃಷ್ಟ ಕೇಂದ್ರವಾಗಿಸಲು ಕಾರ್ಯಮಗ್ನವಾಗುವುದು.

ವಿಶ್ವವಿದ್ಯಾಲಯದ **ಗುರಿಯು** ಬಡತನವನ್ನು ಕಡಿಮೆ ಮಾಡಿ ಉದ್ಯೋಗಾವಕಾಶಗಳನ್ನು ಸೃಷ್ಟಿಸಿ ಜನರು ತಮ್ಮದೇ ಆದ ಕ್ಷೇಮಾಭಿವೃದ್ಧಿ, ಆರ್ಥಿಕ ಮತ್ತು ಸಾಮಾಜೋ- ರಾಜಕೀಯ ಪ್ರಗತಿಗೆ ನಿರ್ಧಾರಗಳನ್ನು ತೆಗೆದುಕೊಳ್ಳುವಂತಹ ಪಂಚಾಯತ್ ರಾಜ್ ಸಂಸ್ಥೆಗಳ ಪ್ರಜಾಪ್ರಭುತ್ವ ವ್ಯವಸ್ಥೆಯ ಮೂಲಕ ಅಂತರ್ಗತ ಬೆಳವಣಿಗೆಗೆ ಕಾರಣವಾಗುವ ಆರೋಗ್ಯ, ಶಿಕ್ಷಣ ಮತ್ತು ಕೌಶಲಾಭಿವೃದ್ಧಿಗಳಲ್ಲಿ ಅಗತ್ಯ ಸೇವೆಗಳನ್ನು ನೀಡಲು ಅವಕಾಶವೀಯುವ ತ್ವರಿತ ಆರ್ಥಿಕ ಬೆಳವಣಿಗೆ ಮತ್ತು ಸುಸ್ಥಿರ ಅಭಿವೃದ್ಧಿಗಾಗಿ ವಿವಿಧ ಪಾಲುದಾರರಿಗೆ ಶಿಕ್ಷಣ ಮತ್ತು ತರಬೇತಿ ನೀಡುವುದು.

ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾಲಯಕ್ಕೆ ಒಂದು ಸೂಕ್ತವಾದ 'ಲಾಂಛನ' ಮತ್ತು 'ಘೋಷವಾಕ್ಯ'ದ ಅವಶ್ಯಕತೆ ಇದೆ. ವಿಶ್ವವಿದ್ಯಾಲಯದ ಭೌಗೋಳಿಕ, ಕಲೆ, ಸಾಂಸ್ಕೃತಿಕ, ಶೈಕ್ಷಣಿಕ ಹಾಗೂ ಧ್ಯೇಯೋದ್ದೇಶಗಳನ್ನು ಪ್ರತಿಬಿಂಬಿಸುವ ಸೂಕ್ತವಾದ 'ಲಾಂಛನ' ಮತ್ತು 'ಘೋಷವಾಕ್ಯ'ವನ್ನು ರಚಿಸಿ ಸಾರ್ವಜನಿಕರು **ದಿನಾಂಕ: 27-09-2017** ರೊಳಗಾಗಿ ಈ ಕೆಳಕಂಡ ವಿಳಾಸಕ್ಕೆ ಕಳುಹಿಸಲು ಕೋರಲಾಗಿದೆ. ಅಂತಿಮವಾಗಿ ಆಯ್ಕೆಯಾದ 'ಲಾಂಛನ' ಮತ್ತು 'ಘೋಷವಾಕ್ಯ'ದ ಕರ್ತೃಗಳಿಗೆ **ರೂ.20,000/-** ಸಂಭಾವನೆ ನೀಡಲಾಗುವುದು. ಹೆಚ್ಚಿನ ವಿವರಗಳಿಗೆ ಈ ಕೆಳಕಂಡವರನ್ನು ಸಂಪರ್ಕಿಸಬಹುದು.

**ವಿಳಾಸ:** ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ,
ರೈತ ಭವನ, ಜನರಲ್ ಕಾರ್ಯಪ್ಪ ವೃತ್ತ, ಗದಗ-582101.
**ಪ್ರಾದೇಶಿಕ ಕಛೇರಿ:** ನೆಲಮಹಡಿ ಗ್ರಾಮೀಣಾಭಿವೃದ್ಧಿ ಭವನ, ಆನಂದ ರಾವ್ ವೃತ್ತ,
ಬೆಂಗಳೂರು-560009.

**ಪ್ರೊ. ಡಾ. ಸುರೇಶ ವಿ. ನಾಡಗೌಡರ**
ಕುಲಸಚಿವರು,
ದೂರವಾಣಿ:-9448267338
ಇಮೇಲ್-registrarksrdpru@gmail.com
Vc.ksrdpru@gmail.com